## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 434 ಗ್ರಾಪಂಅ 2017(1)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 20-06-2019.

## ಸುತ್ತೋಲೆ

ವಿಷಯ: ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಲಾದ ಪ್ರಕರಣಗಳಲ್ಲಿ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ವತಿಯಿಂದ ವಕೀಲರನ್ನು ನೇಮಿಸಿ ಹಾಜರಾಗುವ ಬಗ್ಗೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚನ್ಯಾಯಾಲಯದಲ್ಲಿ ಸಲ್ಲಿಸುವ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಪ್ರತಿನಿಧಿಸಲು ಸದರಿ ಸಂಸ್ಥೆಗಳ ವತಿಯಿಂದ ಯಾವುದೇ ಕ್ರಮ ತೆಗೆದುಕೊಳ್ಳದೆ ಅತ್ಯಂತ ಬೇಜವಾಬ್ದಾರಿಯಿಂದ ನಡೆದುಕೊಳ್ಳುತ್ತಿರುವುದನ್ನು ಮಾನ್ಯ ಉಚ್ಚನ್ಯಾಯಾಲಯವು **WP 14564/2011** ಕ್ಕೆ ಸಂಬಂಧಿಸಿದಂತೆ ದಿನಾಂಕ: 14.06.2019 ರಂದು ನಡೆದ ವಿಚಾರಣೆ ಸಂದರ್ಭದಲ್ಲಿ ತೀವ್ರವಾಗಿ ಪರಿಗಣಿಸಿದ್ದು ಈ ಸಂಬಂಧ ಸದರಿ ಪ್ರಕರಣದಲ್ಲಿ ನ್ಯಾಯಾಲಯದಲ್ಲಿ ತಾಲ್ಲೂಕು ಪಂಚಾಯಿತಿ / ಗ್ರಾಮ ಪಂಚಾಯಿತಿ ವತಿಯಿಂದ ವಕೀಲರ ಮುಖಾಂತರ ಪ್ರತಿನಿಧಿಸಲು ಕ್ರಮ ಜರುಗಿಸದ ಅಧಿಕಾರಿ/ನೌಕರರ ವಿರುದ್ಧ ವಿಚಾರಣೆ ನಡೆಸಿ ನ್ಯಾಯಾಲಯಕ್ಕೆ ವರದಿ ಸಲ್ಲಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇವರಿಗೆ ಸೂಚನೆ ನೀಡಿರುತ್ತದೆ.

ಇಂತಹ ಪ್ರಕರಣಗಳಲ್ಲಿ ಸಂಬಂಧಿಸಿದ ಪಂಚಾಯತ್ ರಾಜ್ ಸಂಸ್ಥೆಗಳು ತೆಗೆದುಕೊಳ್ಳಬೇಕಾದ ಕ್ರಮ ಮತ್ತು ವಹಿಸಬೇಕಾದ ಜವಾಬ್ದಾರಿ ಬಗ್ಗೆ ಸರ್ಕಾರದ ಸುತ್ತೋಲೆ ಸಂಖ್ಯೆ ಗ್ರಾಅಪ 1370 ಗ್ರಾಪಂಅ 2017, ದಿನಾಂಕ: 18.12.2017 ರಲ್ಲಿ ವಿವರವಾದ ಸೂಚನೆಗಳನ್ನು ನೀಡಲಾಗಿದೆ. ಅದಾಗ್ಯೂ ಕೂಡ ಪಂಚಾಯತ್ ರಾಜ್ ಸಂಸ್ಥೆಗಳ ವಿರುದ್ಧ ಮಾನ್ಯ ಉಚ್ಚನ್ಯಾಯಾಲಯದಲ್ಲಿ ಸಲ್ಲಿಸಲಾಗುವ ಪ್ರಕರಣಗಳಲ್ಲಿ ಸದರಿ ಸಂಸ್ಥೆಗಳನ್ನು ಪ್ರತಿನಿಧಿಸಲು ವಕೀಲರನ್ನು ನೇಮಿಸುವುದಾಗಲೀ ಅಥವಾ ಸಂಬಂಧಪಟ್ಟ ಅಧಿಕಾರಿಗಳು ನ್ಯಾಯಾಲಯದಲ್ಲಿ ಹಾಜರಾಗುವುದಾಗಲೀ ಸಮಂಜಸವಾಗಿ ನಡೆಯುತ್ತಿಲ್ಲದಿರುವುದು ಕಂಡುಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ದಿನಾಂಕ: 18.12.2017ರ ಸರ್ಕಾರದ ಸುತ್ತೋಲೆಯನ್ನು ಪುನರುಚ್ಚರಿಸುತ್ತ ಪಂಚಾಯತ್ ರಾಜ್ ಸಂಸ್ಥೆಗಳ ವಿರುದ್ಧ ಮಾನ್ಯ ಉಚ್ಚನ್ಯಾಯಾಲಯದಲ್ಲಿ ಸಲ್ಲಿಸಲಾಗುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಈ ಕೆಳಗಿನಂತೆ ಕಟ್ಟುನಿಟ್ಟಾಗಿ ಕ್ರಮವಹಿಸಲು ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತೊಮ್ಮೆ ಸೂಚಿಸಿದೆ.

1. ನ್ಯಾಯಾಲಯದ ಪ್ರಕರಣಗಳನ್ನು ನಿರ್ವಹಿಸಲು ಜಿಲ್ಲಾ ಪಂಚಾಯಿತಿಗಳಲ್ಲಿ ಉಪಕಾರ್ಯದರ್ಶಿ ಮಟ್ಟದ ಅಧಿಕಾರಿಯನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸುವುದು.
2. ಜಿಲ್ಲೆಗಳ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ. ಜಿಲ್ಲಾ ಪಂಚಾಯಿತಿಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯಗಳಲ್ಲಿ ಪ್ರಕರಣಗಳು ದಾಖಲಾದ ಕೂಡಲೇ ಇಲಾಖೆಯ ನೋಡಲ್ ಅಧಿಕಾರಿಗೆ ಮಾಹಿತಿ ಲಭ್ಯವಾಗುವ ವ್ಯವಸ್ಥೆ ಮಾಡುವುದು.

3. ಪ್ರಕರಣಗಳಿಗೆ ಸಂಬಂಧಿಸಿದಂತೆ ಅವಶ್ಯ ಮಾಹಿತಿಯನ್ನು / ಕಂಡಿಕಾವಾರು ಉತ್ತರಗಳನ್ನು ಸಂಬಂಧಪಟ್ಟ ಸರ್ಕಾರಿ/ ಜಿಲ್ಲಾ ಪಂಚಾಯಿತಿ / ತಾಲ್ಲೂಕು ಪಂಚಾಯಿತಿ / ಗ್ರಾಮ ಪಂಚಾಯಿತಿ ವಕೀಲರನ್ನು ನೇಮಿಸಿ ಅವರಿಗೆ ಸಕಾಲದಲ್ಲಿ ಮಾಹಿತಿ ಸಲ್ಲಿಸಿ ಹಾಗೂ ಸರ್ಕಾರಕ್ಕೆ ವರದಿ ನೀಡುವ ವ್ಯವಸ್ಥೆ ಮಾಡುವುದು.
4. ನ್ಯಾಯಾಲಯಗಳಲ್ಲಿ ಪ್ರಕರಣ ದಾಖಲಾದ ಕೂಡಲೇ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಪರವಾಗಿ ವಕೀಲರ ಮುಖಾಂತರ ಹಾಜರಾಗಲು ತಕ್ಷಣವೇ ಕ್ರಮ ವಹಿಸುವುದು.
5. ಹಾಜರಾಗುವ ವಕೀಲರುಗಳು ಸಮರ್ಥವಾಗಿ ವಾದ ಮಂಡಿಸುವಂತೆ ನೋಡಿಕೊಳ್ಳುವುದು. ಸಮರ್ಥವಾಗಿ ವಾದ ಮಂಡಿಸದ ವಕೀಲರುಗಳನ್ನು ಬದಲಾಯಿಸಿ ಸಮರ್ಥ ವಕೀಲರುಗಳನ್ನು ನೇಮಿಸಲು ಕ್ರಮಕೈಗೊಳ್ಳುವುದು.
6. ನ್ಯಾಯಾಲಯಕ್ಕೆ ಒದಗಿಸುವ ಮಾಹಿತಿಗಳು, ದಾಖಲೆಗಳು ನಿಖರವಾಗಿ, ಕರಾರುವಕ್ಕಾಗಿ ವಾಸ್ತವಿಕವಾಗಿ ಮಂಡಿಸುವ ಜವಾಬ್ದಾರಿ ವಹಿಸುವುದು ಹಾಗೂ
7. ತಾಲ್ಲೂಕು ಪಂಚಾಯಿತಿಯ ಕಾರ್ಯನಿವಾಹಕ ಅಧಿಕಾರಿ, ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ, ಹೆಸರು, ಇ-ಮೇಲ್ ವಿಳಾಸ ಹಾಗೂ ಮೋಬೈಲ್ ದೂರವಾಣಿ ಸಂಖ್ಯೆಗಳನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿ ಕಛೇರಿಗಳು ಕ್ರೋಡೀಕರಿಸಿ ಅಡ್ವೋಕೇಟ್ ಜನರಲ್ ರವರ ಕಛೇರಿಗೆ ಹಾಗೂ ಸರ್ಕಾರಕ್ಕೆ ಶೀಘ್ರವಾಗಿ ಒದಗಿಸಲು ಕ್ರಮ ವಹಿಸುವುದು.

ಮೇಲ್ಕಂಡ ಸೂಚನೆಗಳನ್ನು ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಮತ್ತು ನೌಕರರು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದೆ. ಮೇಲ್ಕಂಡ ಕ್ರಮದಿಂದ ನ್ಯಾಯಾಲಯ ಪ್ರಕರಣಗಳನ್ನು ತ್ವರಿತಗತಿಯಲ್ಲಿ ಇತ್ಯರ್ಥಪಡಿಸಲು ಸಾಧ್ಯವಾಗುವುದು ಹಾಗೂ ವ್ಯಾಜ್ಯಗಳನ್ನು ತಪ್ಪಿಸಬಹುದಾಗಿದೆ. ಈ ಸೂಚನೆಗಳನ್ನು ಪಾಲಿಸದ ಅಧಿಕಾರಿಗಳು / ನೌಕರರುಗಳ ಮೇಲೆ ಕಠಿಣ ಶಿಸ್ತಿನ ಕ್ರಮ ಜರುಗಿಸಲಾಗುವುದು.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು / ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ :

1. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿರವರು.
2. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ / ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ
3. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.